All India Radio: Bangalore
Regional Bulletin In Kannada
22.12.2025 / 6.40 p.m.

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

22.12.2025 6.40 p.m.

***************

ಮುಖ್ಯಾಂಶಗಳು

- ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯ ಆಯೋಜಿಸುವ ಕುರಿತು ಪರಿಶೀಲನೆಗೆ ಸಮಿತಿ ರಚಿಸಿದ ಸರ್ಕಾರ
- ಹಳದಿ ಮೆಟ್ರೋ ರೈಲು ಮಾರ್ಗದ ರಸ್ತೆಗಳಲ್ಲಿ ಶೇಕಡ ೩೦ ರಷ್ಟು ಸಂಚಾರ ದಟ್ಟಣೆ ಕಡಿಮೆ- ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಶೇಕಡ ೩ರ ಬಡ್ಡಿ ದರದಲ್ಲಿ ಕಾಫಿ ಬೆಳೆಗಾರರಿಗೆ ಸಾಲ ಕುರಿತು ಕೇಂದ್ರ ಸರ್ಕಾರದ ಜೊತೆ ಚರ್ಚೆ -ಸಚಿವ ಎಚ್.ಡಿ. ಕುಮಾರಸ್ವಾಮಿ ಭರವಸೆ
- ಭಾರತೀಯ ನೌಕಾಪಡೆಯ ಸೂಕ್ಷ್ಮ ಮಾಹಿತಿ ಪಾಕಿಸ್ತಾನಕ್ಕೆ ರವಾನೆ; ಉಡುಪಿಯಲ್ಲಿ ಮತ್ತೊಬ್ಬ ಆರೋಪಿ ಬಂಧನ
- ಕಲಬುರಗಿ, ಬೀದರ್, ವಿಜಯಪುರದಲ್ಲಿ ಶೀತಗಾಳಿ ಬೀಸುವ ಸಾಧ್ಯತೆ ಹವಾಮಾನ ಇಲಾಖೆ ಮುನ್ಸೂಚನೆ

***************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕ್ರಿಕೆಟ್ ಪಂದ್ಯ ನಡೆಸುವ ಕುರಿತಂತೆ ಪರಿಶೀಲಿಸಲು ಸಮಿತಿ ರಚಿಸಲಾಗಿದೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದ್ದಾರೆ.

ಐಪಿಎಲ್ ಪಂದ್ಯ ಏರ್ಪಡಿಸುವ ಕುರಿತಂತೆ ವಿಧಾನಸೌಧದಲ್ಲಿಂದು ಗೃಹ ಸಚಿವರ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯ ಬಳಿಕ ಮಾತನಾಡಿದ ಅವರು, ಇದೇ ೨೪ರಂದು ವಿಜಯ್ ಹಜಾರೆ ಕ್ರಿಕೆಟ್ ಪಂದ್ಯ ನಡೆಸಲು ಅನುಮತಿ ನೀಡುವಂತೆ ಕೆಎಸ್‌ಸಿಎ ಮನವಿ ಮಾಡಿದೆ. ಸಾರ್ವಜನಿಕರ ವೀಕ್ಷಣೆಗೆ ಅವಕಾಶ ನೀಡುವುದಿಲ್ಲ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಪ್ರೇಕ್ಷಕರ, ಕ್ರೀಡಾಪಟುಗಳ ಸುರಕ್ಷತೆಯ ಹಿತದೃಷ್ಟಿಯಿಂದ ಜಿಬಿಎ ಆಯುಕ್ತರ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಸಮಿತಿಯು ಕ್ರೀಡಾಂಗಣ ಪರಿಶೀಲಿಸಿ, ವರದಿ ನೀಡಿದ ಬಳಿಕ ಸರ್ಕಾರ ಮುಂದಿನ ನಿರ್ಧಾರ ಕೈಗೊಳ್ಳಲಿದೆ ಎಂದು ಗೃಹ ಸಚಿವರು ಹೇಳಿದ್ದಾರೆ.

ಸಭೆಯಲ್ಲಿ ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್, ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಪೊಲೀಸ್ ಮಹಾನಿರ್ದೇಶಕ ಡಾ. ಎಂ.ಎ. ಸಲೀಂ, ಬೆಂಗಳೂರು ನಗರ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಭಾಗಿಯಾಗಿದ್ದರು.

***************

ಬೆಂಗಳೂರಿನಲ್ಲಿ ಹಳದಿ ಮೆಟ್ರೋ ರೈಲು ಮಾರ್ಗದಲ್ಲಿ ಸುಮಾರು ೧ ಲಕ್ಷ ಪ್ರಯಾಣಿಕರು ಪ್ರಯಾಣಿಸುತ್ತಿದ್ದು, ಆ ಭಾಗದಲ್ಲಿ ಶೇಕಡ ೩೦ ರಷ್ಟು ಸಂಚಾರ ದಟ್ಟನೆ ಕಡಿಮೆಯಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಮೆಟ್ರೋ ಕಾಮಗಾರಿ ಕುರಿತಂತೆ ಪರಿಶೀಲನಾ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ಮೇ ಯಿಂದ ಡಿಸೆಂಬರ್ ತಿಂಗಳೊಳಗೆ ೪೧ ಕಿಲೋಮೀಟರ್ ಸೇರ್ಪಡೆ ಮಾಡಲಾಗುವುದು ಎಂದು ಹೇಳಿದ್ದಾರೆ.

ಮುಂದಿನ ವರ್ಷಾಂತ್ಯದೊಳಗೆ ಒಟ್ಟು ೧೭೫ ಕಿಲೋಮೀಟರ್ ಮೆಟ್ರೋ ಮಾರ್ಗಕ್ಕೆ ಚಾಲನೆ ನೀಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ (೩೪ ಸೆಕೆಂಡ್ಸ್)

ಬಳಿಕ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು, ಕೋರಮಂಗಲದಿಂದ ಸರ್ಜಾಪುರದವರೆಗಿನ ಸಂಚಾರಯುಕ್ತ ರಸ್ತೆ ನಿರ್ಮಾಣ ಹಾಗೂ ಮೇಲು ರಸ್ತೆ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

***************

ಕಾಫಿ ಬೆಳೆಗಾರರನ್ನು ಸರ್ಫೇಸಿ ಕಾಯ್ದೆಯಿಂದ ಹೊರತರಲು ಕೇಂದ್ರ ಸರ್ಕಾರ ಹಾಗು ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳುವ ಪ್ರಯತ್ನ ಮಾಡಲಾಗುವುದು ಎಂದು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ ಕುಮಾರಸ್ವಾಮಿ ಭರವಸೆ ನೀಡಿದ್ದಾರೆ.

ಜಿಲ್ಲೆಯ ಬಾಳೆಹೊನ್ನೂರಿನ ಕೇಂದ್ರಿಯ ಕಾಫಿ ಸಂಶೋಧನಾ ಸಂಸ್ಥೆಯಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಅವರು, ಕಾಫಿ ಬೆಳೆಗಾರರು ಅನೇಕ ರೀತಿಯ ಸಮಸ್ಯೆ ಅನುಭವಿಸುತ್ತಿದ್ದಾರೆ. ಇದರ ಜೊತೆಗೆ ಸಾಲದ ವಿಚಾರವಾಗಿ ಸರ್ಫೇಸಿ ಕಾಯ್ದೆ ವ್ಯಾಪ್ತಿಯಲ್ಲಿ ಕಾಫಿ ಬೆಳೆಗಾರರನ್ನು ತಂದಿರುವುದರಿಂದ ಮತ್ತಷ್ಟು ಸಮಸ್ಯೆ ಎದುರಾಗಿದೆ ಎಂದು ಹೇಳಿದ್ದಾರೆ.

ಶೇಕಡ ೩ರ ಬಡ್ಡಿ ದರದಲ್ಲಿ ಸಾಲ ನೀಡುವಂತೆ ಕಾಫಿ ಬೆಳೆಗಾರರು ಬೇಡಿಕೆ ಇಟ್ಟಿದ್ದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರ ಗಮನಕ್ಕೆ ತಂದು ಸಾಲ ಒದಗಿಸಲು ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದ್ದಾರೆ.

***************

ಭಾರತೀಯ ನೌಕಾಪಡೆಯ ಸೂಕ್ಷ್ಮ ಮಾಹಿತಿಯನ್ನು ಪಾಕಿಸ್ತಾನಕ್ಕೆ ರವಾನಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಮತ್ತೊಬ್ಬ ಆರೋಪಿಯನ್ನು ಇಂದು ಬಂಧಿಸಲಾಗಿದೆ.

ಬಂಧಿತನನ್ನು ಗುಜರಾತ್‌ನ ಕೈಲಾಶ್‌ನಗರ ನಿವಾಸಿ ಹಿತೇಂದ್ರ ಎಂದು ಗುರುತಿಸಲಾಗಿದೆ. ಉಡುಪಿ ಜಿಲ್ಲೆಯ ಮಲ್ಪೆ ಪೊಲೀಸ್ ಠಾಣೆ ಅಧಿಕಾರಿಗಳು ಕಾರ್ಯಾಚರಣೆ ನಡೆಸಿ, ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ.

ಪ್ರಕರಣದಲ್ಲಿ ಇನ್ನೂ ಹೆಚ್ಚಿನ ವ್ಯಕ್ತಿಗಳು ಭಾಗಿಯಾಗಿರುವ ಹಿನ್ನೆಲೆಯಲ್ಲಿ ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

***************

ರಾಜ್ಯದ ಹಲವು ಜಿಲ್ಲೆಗಳಲ್ಲಿ ಶೀತಗಾಳಿ ಮುಂದುವರಿದಿದೆ. ಬೀದರ್‌ನಲ್ಲಿ ಕನಿಷ್ಠ ತಾಪಮಾನ ೯.೨ ಡಿಗ್ರಿ ಸೆಲ್ಷಿಯಸ್ ತಾಪಮಾನ ದಾಖಲಾಗಿದೆ.

ಬೀದರ್, ಕಲಬುರಗಿ ಜಿಲ್ಲೆಗಳಲ್ಲಿ ಶೀತಗಾಳಿ ಬೀಸುವ ಸಾಧ್ಯತೆ ಇದೆ. ವಿಜಯಪುರ, ಧಾರವಾಡ, ಮಂಡ್ಯ, ಮೈಸೂರಿನಲ್ಲಿಯೂ ಶೀತಗಾಳಿ ಮುಂದುವರಿಯಲಿದೆ.

ಬೆಂಗಳೂರಿನಲ್ಲಿ ಮುಂಜಾನೆ ದಟ್ಟ ಮಂಜು ಕಂಡುಬರುವ ಸಾಧ್ಯತೆ ಇದೆ. ಕನಿಷ್ಠ ತಾಪಮಾನ ೧೬ ಡಿಗ್ರಿ ಸೆಲ್ಸಿಯಸ್ ಇರಲಿದೆ.

***************

ಆರೋಗ್ಯ ವಿಜ್ಞಾನ ಕ್ಷೇತ್ರದಲ್ಲಿ ನಾವೀನ್ಯತೆಯನ್ನು ಪ್ರೋತ್ಸಾಹಿಸಿ ಸಮಾಜಕ್ಕೆ ಉಪಯುಕ್ತ ಪರಿಹಾರ ಕಂಡುಕೊಳ್ಳಲು ಜವಾಹರಲಾಲ್ ನೆಹರು ಸುಧಾರಿತ ವೈಜ್ಞಾನಿಕ ಸಂಶೋಧನಾ ಕೇಂದ್ರ, ಖಾಸಗಿ ಕೈಗಾರಿಕಾ ಸಂಸ್ಥೆ - ಸಿಆರ್‌ಐಎಸ್‌ಪಿಆರ್ ಜೊತೆಗೆ ಒಡಂಬಡಿಕೆ ಸಹಿ ಮಾಡಲಿದೆ.

ಉಭಯ ಸಂಸ್ಥೆಗಳು ಒಗ್ಗೂಡಿ ಅನುವಂಶಿಕ ಮತ್ತು ಅತಿಸಣ್ಣ ಅಣು, ರಾಸಾಯನಿಕ ಜೀವಶಾಸ್ತ್ರ ಕ್ಷೇತ್ರದಲ್ಲಿ ಸಂಶೋಧನೆ ಕೈಗೊಂಡು, ಆರೋಗ್ಯ ಹಾಗೂ ರಕ್ಷಣಾ ಕ್ಷೇತ್ರದಲ್ಲಿ ಪರಿಹಾರ ಕಂಡುಕೊಳ್ಳಲು ಪ್ರಯತ್ನ ಮಾಡಲಿದೆ. ಈ ಒಪ್ಪಂದವು ಭಾರತದ ಜೈವಿಕ ತಂತ್ರಜ್ಞಾನ ಮತ್ತು ನಾವೀನ್ಯತೆ ಪರಿಸರ ವಿಜ್ಞಾನವನ್ನು ಬಲಪಡಿಸಲಿದೆ.

***************

ಜನರಿಗೆ ಸಕಾಲಕ್ಕೆ ಸೇವೆ ದೊರಕಿಸದ ಹಾಗೂ ಸಾರ್ವಜನಿಕರಿಂದ ದೂರುಗಳು ಸಲ್ಲಿಕೆಯಾಗಿರುವ ಹಿನ್ನಲೆಯಲ್ಲಿ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಗ್ರಾಮ ಪಂಚಾಯಿತಿಗಳ ಅಧಿಕಾರಿ ಹಾಗೂ ಸಿಬ್ಬಂದಿ ವಿರುದ್ಧ ಸ್ವಯಂಪ್ರೇರಿತ ದೂರು ದಾಖಲಾಗಿದೆ.

ಶ್ರೀನಿವಾಸಪುರ ತಾಲೂಕಿನ ದಳಸನೂರು, ಮಾಸ್ತೇನಹಳ್ಳಿ, ಜೆ.ತಿಮ್ಮಸಂದ್ರ, ಆರಿಕುಂಟೆ, ಸೇರಿದಂತೆ ಹಲವು ಗ್ರಾಮ ಪಂಚಾಯಿತಿಗೆ ಅಧಿಕಾರಿಗಳೊಂದಿಗೆ ಉಪಲೋಕಾಯುಕ್ತರು ಭೇಟಿ ನೀಡಿದ್ದರು.

ಭೇಟಿ ಸಂದರ್ಭದಲ್ಲಿ ಸಲ್ಲಿಕೆಯಾಗಿದ್ದ ದೂರುಗಳಿಗೆ ಸಂಬಂಧಿಸಿದ ಮಾಹಿತಿ ಕಲೆ ಹಾಕಿದಾಗ ಅಧಿಕಾರಿಗಳು ಸಮರ್ಪಕವಾಗಿ ಮಾಹಿತಿ ನೀಡುವಲ್ಲಿ ವಿಫಲರಾಗಿದ್ದರು. ಈ ಹಿನ್ನೆಲೆಯಲ್ಲಿ ಒಟ್ಟು ೨೩ ಪ್ರಕರಣಗಳಲ್ಲಿ ೧೯ ಮಂದಿ ವಿರುದ್ಧ ದೂರು ದಾಖಲಾಗಿದೆ.

***************

ರೈತರಿಂದಲೇ ನೇರವಾಗಿ ಕೆಎಂಎಫ್ ಮೆಕ್ಕೆ ಜೋಳ ಖರೀದಿ ಮಾಡುವಂತೆ ಮಾಜಿ ಸಚಿವ ಎಚ್.ಡಿ. ರೇವಣ್ಣ ಒತ್ತಾಯಿಸಿದ್ದಾರೆ.

ಹಾಸನದಲ್ಲಿ ಇಂದು ಸುದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ಅತಿ ಹೆಚ್ಚು ಮಳೆಯಿಂದ ಶೇಕಡ ೫೦ರಷ್ಟು ಮೆಕ್ಕೆ ಜೋಳ ನಷ್ಟವಾಗಿದ್ದು ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ.

ಕೆಎಂಎಫ್ ಖಾಸಗಿಯವರಿಂದ ೨೯ ಸಾವಿರ ಮೆಟ್ರಿಕ್ ಟನ್ ಜೋಳ ಖರೀದಿ ಮಾಡಿದ್ದು, ರೈತರ ಬಳಿ ಕೇವಲ ಹತ್ತು ಸಾವಿರ ಮೆಟ್ರಿಕ್ ಟನ್ ಖರೀದಿ ಮಾಡಲು ಮುಂದಾಗಿದ್ದಾರೆ.  ಕ್ವಿಂಟಾಲ್‌ಗೆ ೨೪ ಸಾವಿರದಂತೆ ರೈತರಿಂದಲೇ  ಮೆಕ್ಕೆ ಜೋಳ ಖರೀದಿ  ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

ಯಗಚಿ - ಕಾಮಸಮುದ್ರ ನಾಲೆ ಕೆಲಸ ಪೂರ್ಣಗೊಳ್ಳದ ಕಾರಣ ಎಂಟು ಸಾವಿರ ಎಕರೆ ಪ್ರದೇಶಕ್ಕೆ ನೀರಾವರಿ ಇಲ್ಲ. ಈ ಹಿನ್ನೆಲೆಯಲ್ಲಿ ಭೂ ಸ್ವಾಧೀನಕ್ಕೆ ಅಗತ್ಯವಿರುವ ಅನುದಾನವನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ಸರ್ಕಾರವನ್ನು ಆಗ್ರಹಿಸಿದ್ದಾರೆ.

***************

ನಾಡಪ್ರಭು ಕೆಂಪೇಗೌಡ ಪ್ರತಿಷ್ಠಾನವು ಭಾರತರತ್ನ ಅಟಲ್ ಬಿಹಾರಿ ವಾಜಪೇಯಿ ಅವರ ೧೦೧ನೇ ಜನ್ಮದಿನವನ್ನು ಇದೇ ೨೫ರಂದು ಜ್ಞಾನಜ್ಯೋತಿ ಸಭಾಂಗಣದಲ್ಲಿ ನಡೆಸಲಿದೆ ಎಂದು ಮಾಜಿ ಉಪಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥನಾರಾಯಣ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿ ‘ಶಿಕ್ಷಣದಲ್ಲಿ ಸುಶಾಸನ’ ಎಂಬ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಸಂವಾದ ಕಾರ್ಯಕ್ರಮದಲ್ಲಿ ಪಬ್ಲಿಕ್ ಯುನಿವರ್ಸಿಟಿ, ಪಠ್ಯಕ್ರಮ, ಕೃತಕ ಬುದ್ಧಿಮತ್ತೆ ಕುರಿತಂತೆ ಸಂವಾದ ನಡೆಸಲು ನಿರ್ಧರಿಸಿದ್ದು, ಶಿಕ್ಷಣ- ತಂತ್ರಜ್ಞಾನ ಕ್ಷೇತ್ರದ ೧೫ ಮಂದಿ ತಜ್ಞರು ಭಾಗವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

***************

ಸಿರಿಧಾನ್ಯ ಮತ್ತು ಸಾವಯವ ಅಂತಾರಾಷ್ಟ್ರೀಯ ವಾಣಿಜ್ಯ ಮೇಳ - ೨೦೨೬ -ರ ಅಂಗವಾಗಿ ದಾವಣಗೆರೆಯಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಇದೇ ೩೧ ರಂದು ಹಮ್ಮಿಕೊಳ್ಳಲಾಗಿದೆ.

ಒಟ್ಟು ಮೂರು ವಿಭಾಗದಲ್ಲಿ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ಶ್ರೀಧರ ಮೂರ್ತಿ ತಿಳಿಸಿದ್ದಾರೆ.

ಸಿಹಿ ಮತ್ತು ಖಾರದ ಖಾದ್ಯವನ್ನು ಸಿರಿಧಾನ್ಯಗಳಿಂದ ಮನೆಯಲ್ಲಿಯೇ ತಯಾರಿಸಿ ಸ್ಪರ್ಧೆಯಲ್ಲಿ ಪ್ರದರ್ಶಿಸಲು ಅವಕಾಶವಿರುತ್ತದೆ ಎಂದು ಅವರು ಹೇಳಿದ್ದಾರೆ.

*******ಮುಕ್ತಾಯ********